# ಕರ್ನಾಟಕ ಸರ್ಕಾರದ ನಡವಳಿಗಳು

28 NOV 2018
9506

ವಿಷಯ: ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಲ್ಲಿ (ತೆಂಗಿನ ನಾರಿನ ಪ್ರಾಥಮಿಕ ಸಹಕಾರ ಸಂಘಗಳನ್ನು ಒಳಗೊಂಡಂತೆ) ಕೆಲಸ ನಿರ್ವಹಿಸುತ್ತಿರುವ ಪ್ರತಿ ಕುಶಲಕರ್ಮಿಗೆ ವಾರ್ಷಿಕ 10,000/- ರೂ.ಗಳಂತೆ ಪ್ರೋತ್ಸಾಹ ವೇತನವನ್ನು ನೀಡುವ ಕುರಿತು.

ಓದಲಾಗಿದೆ:
1. ಆಯುಕ್ತರು, ಎಂ.ಎಸ್.ಎಂ.ಇ. ನಿರ್ದೇಶನಾಲಯ, ಇವರ ಪತ್ರ ಸಂ. ಕೈವಾಇ/ಗ್ರಾಕೈ&ಸ್ವಉಕಾ/ಅಧೀ/ತೆಂನಾಅ/20/2018-19,ದಿ: 17.07.2018. ಮತ್ತು ದಿ: 22.09.2018.
2. ಸರ್ಕಾರಿ ಆದೇಶ ಸಂ. ಸಿಐ 49 ಸಿಎಸ್‌ಸಿ 2017, ಬೆಂಗಳೂರು, ದಿನಾಂಕ: 06.06.2017 ಮತ್ತು 01.01.2018.
3. ಯೋಜನಾ ಇಲಾಖೆಯ ಟಿಪ್ಪಣಿ ಸಂ: ಪಿಡಿ 47 ಎಫ್‌ಆರ್‌ಒ 2018, ದಿ: 06.09.2018.
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: FD 379 Exp-1/2018, dated: 22.10.2018.

* * * * *

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಭಾಷಣ (ಜುಲೈ 2018) ರ ಕಂಡಿಕೆ 104 ರಲ್ಲಿ ***"ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ತೆಂಗಿನನಾರಿನ ವಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಕುಶಲಕರ್ಮಿಗಳು ಅಲ್ಪ ಪ್ರಮಾಣದ ವೇತನವನ್ನು ಪಡೆಯುತ್ತಿರುತ್ತಾರೆ. ಆದ್ದರಿಂದ, ತೆಂಗಿನನಾರಿನ ವಲಯಕ್ಕೆ ಉತ್ತೇಜನ ನೀಡಲು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರತಿ ಕುಶಲಕರ್ಮಿಗೆ ವಾರ್ಷಿಕ 10,000/- ರೂ.ಗಳಂತೆ ಪ್ರೋತ್ಸಾಹ ವೇತನವನ್ನು ನೀಡಲು ಸರ್ಕಾರವು ಉದ್ದೇಶಿಸಿದೆ"*** ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂ: (2) ರ ಸರ್ಕಾರಿ ಆದೇಶಗಳಲ್ಲಿ ತೆಂಗುಭಾಗ್ಯ ಯೋಜನೆಯಡಿಯಲ್ಲಿ ಕರ್ನಾಟಕ ರಾಜ್ಯ ತೆಂಗಿನನಾರಿನ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ತೆಂಗಿನನಾರಿನ ಸಹಕಾರ ಮಹಾಮಂಡಳಿಯ ತೆಂಗು ನಾರಿನ ಕುಶಲಕರ್ಮಿಗಳಿಗೆ ಅನುರೂಪ ಪ್ರೋತ್ಸಾಹ ಧನವನ್ನು ಪಾವತಿಸಲು ಯೋಜನೆ ಜಾರಿಯಲ್ಲಿರುತ್ತದೆ.

ಅದರಂತೆ, ಮೇಲೆ ಓದಲಾದ ಕ್ರಮ ಸಂ: (1) ರ ಪತ್ರದಲ್ಲಿ ಆಯುಕ್ತರು, ಎಂ.ಎಸ್.ಎಂ.ಇ. ನಿರ್ದೇಶನಾಲಯ, ಇವರು ತೆಂಗಿನನಾರಿನ ವಲಯದ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಲ್ಲಿ (ತೆಂಗಿನ ನಾರಿನ ಪ್ರಾಥಮಿಕ ಸಹಕಾರ ಸಂಘಗಳನ್ನು ಒಳಗೊಂಡಂತೆ) ಕೆಲಸ ನಿರ್ವಹಿಸುತ್ತಿರುವ ಕುಶಲ ಕರ್ಮಿಗಳಿಗೆ ವಾರ್ಷಿಕ ರೂ.10,000/- ಗಳ ಮಿತಿಗೊಳಪಟ್ಟು ರಾಜ್ಯ ಸರ್ಕಾರದ ತೆಂಗುಭಾಗ್ಯ ಯೋಜನೆಯಡಿಯಲ್ಲಿ ಪ್ರೋತ್ಸಾಹ ವೇತನವನ್ನು ನೀಡಲು ಸರ್ಕಾರದ ಅನುಮೋದನೆಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಕ್ರಮಾಂಕ 655
30 NOV 2018

2018–19ನೇ ಸಾಲಿನ ಆಯವ್ಯಯ ಭಾಷಣ (ಜುಲೈ 2018) ರ ಕಂಡಿಕೆ 104 ರ ಕುರಿತು ಆರ್ಥಿಕ ಇಲಾಖೆ ಮತ್ತು ಯೋಜನಾ ಇಲಾಖೆಗಳು ನೀಡಿರುವ ಅಭಿಪ್ರಾಯದ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂ. ಸಿಐ 78 ಸಿಎಸ್‌ಸಿ 2018, ಬೆಂಗಳೂರು, ದಿನಾಂಕ: 20.11.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018–19ನೇ ಸಾಲಿನ ಆಯವ್ಯಯ ಭಾಷಣ (ಜುಲೈ 2018) ಕಂಡಿಕೆ 104 ರಲ್ಲಿ ಘೋಷಿಸಲಾಗಿರುವಂತೆ, ತೆಂಗು ಭಾಗ್ಯ ಯೋಜನೆಯಡಿಯಲ್ಲಿ ತೆಂಗಿನನಾರಿನ ವಲಯದ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಲ್ಲಿ (ತೆಂಗಿನ ನಾರಿನ ಪ್ರಾಥಮಿಕ ಸಹಕಾರ ಸಂಘಗಳನ್ನು ಒಳಗೊಂಡಂತೆ) ಕೆಲಸ ನಿರ್ವಹಿಸುತ್ತಿರುವ ಕುಶಲ ಕರ್ಮಿಗಳಿಗೆ ವಾರ್ಷಿಕ ರೂ.10,000/– ಗಳ ಮಿತಿಗೊಳಪಟ್ಟು ಪ್ರೋತ್ಸಾಹ ವೇತನವನ್ನು ನೀಡುವ ಹೊಸ ಯೋಜನೆಗೆ ಅನುಬಂಧ–1ರಲ್ಲಿ ನೀಡಿರುವ ಮಾರ್ಗಸೂಚಿಗಳೊಂದಿಗೆ ಸರ್ಕಾರದ ಅನುಮೋದನೆ ನೀಡಲಾಗಿದೆ.

- ಸದರಿ ಯೋಜನೆಯನ್ನು ಆಯವ್ಯಯದಲ್ಲಿ ಹಂಚಿಕೆ ಮಾಡಲಾಗಿರುವ ಅನುದಾನದ ಮಿತಿಯೊಳಗೆ ಅನುಷ್ಠಾನಗೊಳಿಸುವುದು.
- ಪ್ರತಿ ಕಾರ್ಮಿಕ/ಳು ಸದರಿ ಕೈಗಾರಿಕೆಗಳಲ್ಲಿ ವರ್ಷವೊಂದರಲ್ಲಿ ಸರಾಸರಿ ಕಾರ್ಯನಿರ್ವಹಿಸುವ ದಿನಗಳನ್ನು ಪರಿಶೀಲಿಸಿ, ಸದರಿ 120 ದಿನಗಳ ಕನಿಷ್ಠ ಮಿತಿಯನ್ನು ಮೇಲ್ಮುಖವಾಗಿ ಪರಿಷ್ಕರಿಸಲು ಪರಿಶೀಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂ: ಪಿಡಿ 47 ಎಫ್‌ಆರ್‌ಒ 2018, ದಿ: 06.09.2018 ಮತ್ತು ಯೋಜನಾ ಇಲಾಖೆಯು ಟಿಪ್ಪಣಿ ಸಂ: FD 379 Exp-1/2018, dated: 22.10.2018 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20.11.18
*[ಸುಮತಿ ಎಸ್.]*
ಸರ್ಕಾರದ ಅಧೀನ ಕಾರ್ಯದರ್ಶಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
3. ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.

5. ಮಾನ್ಯ ಸಣ್ಣ ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಆಯುಕ್ತರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ನಿರ್ದೇಶನಾಲಯ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ವಿಟಿಪಿಸಿ ಬಿಲ್ಡಿಂಗ್, ಕಸ್ತೂರಿಬಾ ರಸ್ತೆ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, 3ನೇ ಮಹಡಿ, 1ನೇ ಅಡ್ಡರಸ್ತೆ, ರಾಜಾಜಿನಗರ ಕೈಗಾರಿಕಾ ವಸಾಹತು, ಬೆಂಗಳೂರು-10.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು-1.
10. ಹಿರಿಯ ನಿರ್ದೇಶಕರು (ಪಿಎಫ್ಆರ್), ಯೋಜನಾ ಇಲಾಖೆ, ಕೊ.ಸಂ. 720, 7ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, (ಸಮನ್ವಯ & ಸೇವೆಗಳು), ವಿಕಾಸಸೌಧ, ಬೆಂಗಳೂರು. (ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)
14. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.